C.W. 3 PW 1

**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ. ನ್ಯಾ ದಂಡಾಧಿಕಾರಿಗಳ ನ್ಯಾಯಾಲಯ, ಕುಮಟಾ**

**ಸಿ.ಸಿ. ನಂ. 564/2024**

ಸಿ.ಡಬ್ಲ್ಯು 3

ಪಿ.ಡಬ್ಲ್ಯು 1

| | |
|---|---|
| ಸಾಕ್ಷಿದಾರರ ಹೆಸರು | – ಗಣಪತಿ ಮುಕ್ರಿ |
| ತಂದೆಯ ಹೆಸರು | – ಸುಕ್ರು ಮುಕ್ರಿ |
| ವಯಸ್ಸು | – 35 ವರ್ಷ |
| ಉದ್ಯೋಗ | – ಕೂಲಿ ಕೆಲಸ |
| ವಾಸ್ತವ್ಯ | – ಹೆಗಡೆ, ಕುಮಟಾ |

(ಇಂದು ದಿನಾಂಕಃ 15–10–2024 ರಂದು ಸತ್ಯಪ್ರತಿಜ್ಞೆಯ ಮೇರೆಗೆ ಪ್ರಮಾಣವಚನ ಬೋಧಿಸಲಾಯಿತು.)

**ಮುಖ್ಯ ವಿಚಾರಣೆ – ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ನನಗೆ ಚಾ.ಸಾ. 1, 2 ರವರ ಪರಿಚಯ ಇದೆ. ನನಗೆ ಆರೋಪಿತರ ಪರಿಚಯ ಇದೆ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ, ಅದರಲ್ಲಿ ತಮ್ಮ ಸಹಿ ಇರುವುದಾಗಿ ಒಪ್ಪಿದ್ದು, ಸದರಿ ದಾಖಲಾತಿ ಪಂಚನಾಮೆ ಆಗಿದ್ದು, ಅದನ್ನು ನಿ.ಪಿ. 1 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ. 1(ಎ) ಎಂದು ಗುರುತಿಸಲಾಯಿತು. ನಿ.ಪಿ. 1 ಕ್ಕೆ 2 ತಿಂಗಳ ಹಿಂದೆ ಸಹಿ ಮಾಡಿರುತ್ತೇನೆ. ನಿ.ಪಿ. 1 ರಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ನಿ.ಪಿ. 1 ಕ್ಕೆ ಸಹಿ ಹಾಕಿರುತ್ತೇನೆ. ಸಾಕ್ಷಿಗೆ ಎರಡು ಫೋಟೋಗಳನ್ನು ತೋರಿಸಲಾಗಿ, ಅದರಲ್ಲಿ ತಾವು ಕಂಡುಬರುವುದಾಗಿ ಒಪ್ಪಿದ್ದು, ಅವುಗಳನ್ನು ನಿ.ಪಿ. 2 ಮತ್ತು 3 ಎಂದು ಗುರುತಿಸಲಾಯಿತು. ನಿ.ಪಿ. 2 ಮತ್ತು 3 ನ್ನು ಯಾವ ವಿಚಾರಕ್ಕೆ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು

ಯಾವುದೇ ವಸ್ತುಗಳನ್ನು ತೋರಿಸಿದ್ದು ಇರುವುದಿಲ್ಲ ಹಾಗೂ ನನ್ನ ಸಮಕ್ಷಮ ಜಪ್ತುಪಡಿಸಿಕೊಂಡಿದ್ದು ಇರುವುದಿಲ್ಲ.

**(ಈ ಹಂತದಲ್ಲಿ ಸದ್ರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಸ.ಸ.ಅ. ರವರು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)**

**ಪಾಟೀ ಸವಾಲು –ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ದಿಃ 26–11–2023 ರಂದು ನನ್ನ ಹಾಗೂ ಚಾ.ಸಾ. 2 ರವರ ಸಮಕ್ಷಮ ಆರೋಪಿತರು ಹಾಗೂ ಚಾ.ಸಾ. 1 ರವರಿಗೆ ಆದಂತಹ ಗಲಾಟೆ ವಿಚಾರವಾಗಿ ಘಟನಾ ಸ್ಥಳದಲ್ಲಿ 11.00 ರಿಂದ 11.30 ಗಂಟೆಯ ವರೆಗೆ ಘಟನಾ ಸ್ಥಳದ ಪಂಚನಾಮೆ ಜರುಗಿಸಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಸದ್ರಿ ನಿ.ಪಿ. 1 ಜರುಗಿಸುವ ಸಂದರ್ಭದಲ್ಲಿ ನಿ.ಪಿ. 2 ಮತ್ತು 3 ರಂತೆ ಘಟನಾ ಸ್ಥಳದಲ್ಲಿ ಪಂಚನಾಮೆ ಜರುಗಿಸಿದ ಬಗ್ಗೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ಚಾ.ಸಾ. 1 ರವರ ಹಲ್ಲೆಯ ಸಂದರ್ಭದಲ್ಲಿ ಚಾ.ಸಾ. 1 ರವರ ಕಪ್ಪು ಮತ್ತು ಬಿಳಿ ಬಣ್ಣದ ಗೆರೆ ಯುಳ್ಳ ಪೂರ್ತಿ ತೋಳಿನ ಹರಿದ ಶರ್ಟನ್ನು ಪಂಚನಾಮೆ ಜರುಗಿಸಿ ಸದ್ರಿ ಶರ್ಟನ್ನು ಜಪ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ. 1 ರಂತೆ ಪಂಚನಾಮೆಯನ್ನು ಜರುಗಿಸಿ ನಿ.ಪಿ. 2 ಮತ್ತು 3 ರಂತೆ ಫೋಟೋವನ್ನು ತೆಗೆದು ಚಾ.ಸಾ. 1 ರವರ ಹರಿದ ಶರ್ಟನ್ನು ವಶಪಡಿಸಿಕೊಂಡಿದ್ದರು ನನಗೆ ತಿಳಿದಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿ.ಪಿ. 1 ರಲ್ಲಿ ಬರೆದಿರುವ ವಿಚಾರಗಳ ಬಗ್ಗೆ ನನಗೆ ಸ್ಪಷ್ಟ ಮತ್ತು ಸಂಪೂರ್ಣ ಮಾಹಿತಿ ಇದ್ದರು ಮಾಹಿತಿ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರ ಪರಿಚಯ ಇದ್ದ ಕಾರಣ ಆರೋಪಿತರಿಗೆ ಸಹಾಯವಾಗಲೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು –ಆರೋಪಿತರ ಪರ ಶ್ರೀ ಆರ್.ಜಿ.ಎನ್. ವಕೀಲರಿಂದ**

ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆ – ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

ಪ್ರ.ದ.ನ್ಯಾ.ದಂ. ಕುಮಟಾ